# Akashvani : Bangalore
# Regional Bulletin In Kannada
# 14.12.2024 / 18.40 hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.12.2024 / 18.40 hrs**

**<><*<><>*><>**

## ಮುಖ್ಯಾಂಶಗಳು

**೧. ಆಹಾರ ಸುರಕ್ಷತೆ ಗುಣಮಟ್ಟ ಇಲಾಖೆ ಮತ್ತು ಔಷಧ ನಿಯಂತ್ರಣ ಇಲಾಖೆ ವಿಲೀನಗೊಳಿಸಿ ರಾಜ್ಯ ಸರ್ಕಾರ ಆದೇಶ**

**೨. ರಾಷ್ಟ್ರೀಯ ತೋಟಗಾರಿಕಾ ಸಂಸ್ಥೆಗೆ ಡೀಮ್ಡ್ ವಿವಿ ಮಾನ್ಯತೆ ನೀಡುವಂತೆ ಕೇಂದ್ರ ಕೃಷಿ ಸಚಿವರಿಗೆ ಸಂಸದ ಸಿ.ಎನ್. ಮಂಜುನಾಥ್ ಮನವಿ**

**೩. ಕೋವಿಡ್ ಹಗರಣದಲ್ಲಿ ಎಫ್ಐಆರ್ ದಾಖಲಿಸಿರುವುದು ಸೇಡಿನ ರಾಜಕಾರಣ ; ಬಿಜೆಪಿ ಆರೋಪ**

**೪. ಆಧಾರ್‌ಗೆ ಉಚಿತ ಆನ್‌ಲೈನ್ ದಾಖಲೆ ಅಪ್‌ಲೋಡ್ ಅವಧಿ ವಿಸ್ತರಣೆ**

**<><*<><>*><>**

ಆಹಾರ ಸುರಕ್ಷತೆ ಗುಣಮಟ್ಟ ಇಲಾಖೆ ಮತ್ತು ಔಷಧ ನಿಯಂತ್ರಣ ಇಲಾಖೆಗಳನ್ನು ವಿಲೀನಗೊಳಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಎಂದು ಹೊಸದಾಗಿ ನಾಮಕರಣ ಮಾಡಲಾಗಿದೆ. ಹೊಸ ಇಲಾಖೆಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಆಯುಕ್ತರೇ ಮುಖ್ಯಸ್ಥರಾಗಿದ್ದಾರೆ. ಎರಡು ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿ ಕಾರ್ಯನಿರ್ವಹಣೆಗೆ ಸೂಚನೆ ನೀಡಲಾಗಿದೆ. ಬಳ್ಳಾರಿ ಜಿಲ್ಲಾಸ್ಪತ್ರೆಯ ಬಾಣಂತಿಯರ ಸಾವಿಗೆ ಐವಿ ರಿಂಗರ್ ಲ್ಯಾಕ್ಟೇಟ್ ದ್ರಾವಣ ಕಾರಣ ಎಂಬ ವಿಚಾರ ಬಹಿರಂಗಗೊಳ್ಳುತ್ತಿದ್ದಂತೆ ಔಷಧ ನಿಯಂತ್ರಣ ಇಲಾಖೆ ವಿರುದ್ಧ ಹಲವು ಆರೋಪ ಕೇಳಿಬಂದಿದ್ದವು. ಡಿಸೆಂಬರ್ ೬ ರಂದು ನಡೆದ ಸಂಪುಟ ಸಭೆಯಲ್ಲಿ ಎರಡೂ ಇಲಾಖೆ ವಿಲೀನಕ್ಕೆ ಸಚಿವರು ಒಪ್ಪಿಗೆ ಸೂಚಿಸಿದ್ದರು. ಸಚಿವ ಸಂಪುಟದಲ್ಲಿ ಅನುಮೋದನೆ ದೊರೆತ ಬಳಿಕ ಸರ್ಕಾರ ಎರಡೂ ಇಲಾಖೆಗಳನ್ನು ವಿಲೀನಗೊಳಿಸಿ ಆದೇಶ ಹೊರಡಿಸಿದೆ.

**<><*<><>*><>**

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಬೆಂಗಳೂರು ಗ್ರಾಮಾಂತರ ಸಂಸದ ಡಾ. ಸಿ.ಎನ್ ಮಂಜುನಾಥ್ ನವದೆಹಲಿಯಲ್ಲಿ ಭೇಟಿಯಾಗಿ ಚರ್ಚೆ ನಡೆಸಿದ್ದಾರೆ. ಈ ವೇಳೆ ಬೆಂಗಳೂರಿನ ಹೆಸರಘಟ್ಟದಲ್ಲಿರುವ ರಾಷ್ಟ್ರೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಗೆ ಡೀಮ್ಡ್ ವಿಶ್ವವಿದ್ಯಾಲಯದ ಮಾನ್ಯತೆ ನೀಡುವಂತೆ ಮನವಿ ಸಲ್ಲಿಸಿದ್ದಾರೆ. ಇದಕ್ಕೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ತಿಳಿಸಿದ್ದಾರೆ. ೧೯೬೭ರಿಂದ ಸಂಸ್ಥೆ ಕಾರ್ಯ ನಿರ್ವಹಿಸುತ್ತಿದ್ದು ಸುಮಾರು ೨೫೦ ಹೊಸ ತಳಿಗಳನ್ನು ದೇಶಕ್ಕೆ ನೀಡಿದೆ. ಸುಮಾರು ೪ ಸಾವಿರಕ್ಕೂ ಹೆಚ್ಚು ಸಂಶೋಧನೆಗಳನ್ನು ಇಲ್ಲಿ ನಡೆಸಲಾಗಿದೆ.

**ಧ್ವನಿ : ಡಾ. ಸಿ.ಎನ್. ಮಂಜುನಾಥ್**

**<><*<><>*><>**

ಚಿಕ್ಕಮಗಳೂರು ನಗರದಿಂದ ತಿರುಪತಿಗೆ ನೂತನವಾಗಿ ರೈಲು ಸಂಚಾರಕ್ಕೆ ವ್ಯವಸ್ಥೆ ಮಾಡುವಂತೆ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಉಡುಪಿ-ಚಿಕ್ಕಮಗಳೂರು ಸಂಸದ ಕೋಟಾ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡ ಅವರು, ಚಿಕ್ಕಮಗಳೂರಿನಿಂದ ಹೊರಟು ಬೆಂಗಳೂರು ಮಾರ್ಗವಾಗಿ ತಿರುಪತಿ ತಲುಪುವಂತೆ ನೂತನ ರೈಲು ಸಂಚಾರ ಆರಂಭಕ್ಕೆ

ಮನವಿ ಮಾಡಲಾಗಿದೆ. ಇದಕ್ಕೆ ಸಚಿವರು ಸಕರಾತ್ಮಕವಾಗಿ ಸ್ಪಂದಿಸಿದ್ದು ನೂತನ ರೈಲು ಮಂಜೂರಾತಿಗೆ ಕಡತ ಮಂಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಎಂದು ಹೇಳಿದ್ದಾರೆ.

**<><*<><>*><>**

ಕೋವಿಡ್ ಹಗರಣಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಿಸಿರುವುದು ಕರ್ನಾಟಕ ಸರ್ಕಾರದ ಸೇಡಿನ ರಾಜಕಾರಣ ಎಂದು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಆರೋಪಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮತ್ತು ವಾಲ್ಮೀಕಿ ಕಲ್ಯಾಣ ಪ್ರಾಧಿಕಾರದಲ್ಲಿ ನಡೆದಿರುವ ಅವ್ಯವಹಾರಗಳು ಬಯಲಾಗಿದೆ.  ಇದನ್ನು ಮುಚ್ಚಿಹಾಕಲು ಮತ್ತು ಹಿಂದಿನ ಬಿಜೆಪಿ ಸರ್ಕಾರದ ಮೇಲೆ ಸೇಡಿನ ರಾಜಕಾರಣ ಮಾಡುವ ಉದ್ದೇಶದಿಂದ ಮಾಜಿ ಮಂತ್ರಿಗಳು ಸೇರಿದಂತೆ ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಶೆಟ್ಟರ್ ದೂರಿದ್ದಾರೆ.

**<><*<><>*><>**

ಕಾಂಗ್ರೆಸ್ ಸೇಡಿನ ರಾಜಕಾರಣ ಮಾಡುತ್ತಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಕೋವಿಡ್ ಹಗರಣ ಎಫ್‌ಐಆರ್ ಕುರಿತು ಪ್ರತಿಕ್ರಿಯಿಸಿದ ಅವರು  ಸರ್ಕಾರವು ಹೈಕೋರ್ಟ್ ನ್ಯಾಯಮೂರ್ತಿ ಜಾನ್ ಮೈಕೆಲ್ ಡಿ. ಕುನ್ಹಾ ನೇತೃತ್ವದಲ್ಲಿ ಆಯೋಗವನ್ನು ರಚಿಸಿದ್ದು ಸಮಿತಿಯ ಶಿಫಾರಸುಗಳ ಪ್ರಕಾರ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ಬಿಜೆಪಿ ನಾಯಕರು ಮಾಡುತ್ತಿರುವ ಆರೋಪ ಸತ್ಯಕ್ಕೆ ದೂರವಾದದ್ದು ಎಂದು ತಿಳಿಸಿದ್ದಾರೆ.

**<><*<><>*><>**

ಆಧಾರ್‌ಗೆ ಉಚಿತ ಆನ್‌ಲೈನ್ ದಾಖಲೆಗಳನ್ನು ಅಪ್‌ಲೋಡ್ ಮಾಡುವ ಸೌಲಭ್ಯವನ್ನು ೨೦೨೫ರ ಜೂನ್ ೧೪ರವರೆಗೆ ವಿಸ್ತರಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಆಧಾರ್ ಕಾರ್ಡ್ ನವೀಕರಣ ಮಾಡಲು ಇಂದು ಕೊನೆಯ ದಿನವಾಗಿತ್ತು. ಇದೀಗ ದಿನಾಂಕ ವಿಸ್ತರಿಸಿರುವುದರಿಂದ ಉಚಿತವಾಗಿ ಆನ್‌ಲೈನ್‌ಮೂಲಕ ಇಲ್ಲವೇ ಆಧಾರ್ ಕೇಂದ್ರಗಳಿಗೆ ತೆರಳಿ ನವೀಕರಣ ಮಾಡಿಸಿಕೊಳ್ಳಬಹುದಾಗಿದೆ.

**<><*<><>*><>**

ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ನಡೆಯುತ್ತಿದ್ದ ದತ್ತ ಜಯಂತಿ ಕಾರ್ಯಕ್ರಮಕ್ಕೆ ಶಾಂತಿಯುತವಾಗಿ ತೆರೆ ಬಿದ್ದಿದೆ.  ಇಂದು ಮಂಜಿನ ವಾತಾವರಣ ಚಳಿಯನ್ನು ಲೆಕ್ಕಿಸದೆ ಸಾವಿರಾರು ದತ್ತ ಮಾಲಧಾರಿಗಳು ದತ್ತಪೀಠಕ್ಕೆ ತೆರಳಿ ಸರತಿ ಸಾಲಿನಲ್ಲಿ ನಿಂತು ದತ್ತಪಾದುಕೆ ದರ್ಶನ ಪಡೆದುಕೊಂಡಿದ್ದಾರೆ. ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ, ಕಾರ್ಕಳ ಶಾಸಕ ವಿ.ಸುನೀಲ್ ಕುಮಾರ್ ದತ್ತಪೀಠದಲ್ಲಿ ಪಾದುಕೆ ದರ್ಶನ ಪಡೆದರು. ಪೀಠದ ಹೊರಭಾಗದಲ್ಲಿ ನಿಗಧಿಪಡಿಸಿದ ಸ್ಥಳದಲ್ಲಿ ಪೂಜೆ, ಹೋಮ ಕಾರ್ಯಕ್ರಮಕ್ಕೆ ಜಿಲ್ಲಾಡಳಿತ ಅವಕಾಶ ಕಲ್ಪಿಸಿದ್ದು ಅಂತೆಯೇ ಎಲ್ಲಾ ಕಾರ್ಯಕ್ರಮಗಳು ಸುಸೂತ್ರವಾಗಿ ನೆರವೇರಿದೆ. ಯಾವುದೆ ಅಹಿತಕರ ಘಟನೆ ನಡೆಯದಂತೆ ಜಿಲ್ಲಾಡಳಿತ ಮುನ್ನೆಚ್ಚರಿಕೆ ವಹಿಸಿತ್ತು. ಪೀಠದ ಹೊರಭಾಗದಲ್ಲಿ ವೀಡಿಯೋ ಚಿತ್ರೀಕರಣ, ಚೆಕ್ ಪೋಸ್ಟ್‌ಗಳಲ್ಲಿ ವಾಹನಗಳ ತಪಾಸಣೆ, ಸೂಕ್ಷ್ಮ ಪ್ರದೇಶಗಳಲ್ಲಿ ಡ್ರೋಣ್ ಚಿತ್ರೀಕರಣ ಮಾಡಲಾಗಿತ್ತು ಎಂದು ಜಿಲ್ಲಾಡಳಿತ ಸ್ಪಷ್ಟಪಡಿಸಿದೆ.

**<><*<><>*><>**

ನ್ಯಾಯಾಂಗ ಇಲಾಖೆ ಸಿಬ್ಬಂದಿಗೂ ಕ್ರೀಡಾಕೂಟ ಹಮ್ಮಿಕೊಳ್ಳಲು ಪ್ರಯತ್ನ ಮಾಡಲಾಗುವುದು ಎಂದು ಯಾದಗಿರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಬಿ.ಎಸ್ ರೇಖಾ ತಿಳಿಸಿದ್ದಾರೆ. ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿ ರಾಜ್ಯ ಕಂದಾಯ ಇಲಾಖೆ ನೌಕರರ ಸಂಘದ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸರ್ಕಾರಿ ನೌಕರರಿಗೆ ಒತ್ತಡ ಜಾಸ್ತಿ. ಇದರ ನಿವಾರಣೆಗೆ ವಾಕಿಂಗ್, ಯೋಗ, ಸಂಗೀತ ಇತ್ಯಾದಿ ಮಾನಸಿಕ ಉಲ್ಲಾಸ ನೀಡುವ ಕ್ರಿಯೆಗಳನ್ನು ರೂಢಿ ಮಾಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಮಾತನಾಡಿ ಕಂದಾಯ ಇಲಾಖೆಯಲ್ಲಿ ೧ ವರ್ಷದಲ್ಲಿ ಹೊಸ ಆಪ್ ಮೂಲಕ ರೈತರ ಎಲ್ಲಾ ಪಹಣಿಗಳು ಆಧಾರ್‌ಗೆ ಜೋಡಣೆ ಮಾಡಲಾಗುತ್ತಿದ್ದು ರಾಜ್ಯದಲ್ಲಿ ಯಾದಗಿರಿ ಜಿಲ್ಲೆಗೆ ೫ನೇ ಸ್ಥಾನ ದೊರೆತಿದೆ.  ಸುಮಾರು ೬ ಲಕ್ಷ ಪಹಣಿಗಳಿದ್ದು, ಅದರಲ್ಲಿ ೫ಲಕ್ಷ ೫೬

ಸಾವಿರದಷ್ಟು ರೈತರ ಪಹಣಿಗಳಿಗೆ ಆಧಾರ್ ಜೋಡಣೆ ಮಾಡುವ ಮೂಲಕ ಶೇಖಡ ೯೧. ರಷ್ಟು ಸಾಧನೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಇಂದು ಕಲಬುರಗಿ ಹೈಕೋರ್ಟ್ ಪೀಠದಲ್ಲಿ ಜರುಗಿದ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದಲ್ಲಿ ೨೦೫ ಪ್ರಕರಣಗಳನ್ನು ಪರಸ್ಪರ ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿ ೪ ಕೋಟಿ ೨೮ ಲಕ್ಷ ೯೯ ಸಾವಿರದ ೧೫೫ ರೂಪಾಯಿ ಪರಿಹಾರ ನೀಡುವಂತೆ ಜನತಾ ಅದಾಲತ್ ಆದೇಶಿಸಿದೆ. ಹೈಕೋರ್ಟ್ ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿಯಿಂದ ಆಯೋಜಿಸಿದ ಕಾರ್ಯಕ್ರಮದಲ್ಲಿ ಮೋಟಾರು ವಾಹನ ವಿಮೆ ಪ್ರಕರಣಗಳನ್ನು  ವಕೀಲರು ಮತ್ತು ಕಕ್ಷಿದಾರರ ಸಮಕ್ಷಮ ರಾಜಿ ಸಂಧಾನ ಮೂಲಕ ಇತ್ಯರ್ಥಪಡಿಸಲಾಯಿತು. ಜನತಾ ಅದಾಲತ್‌ನಲ್ಲಿ ಕರ್ನಾಟಕ ಉಚ್ಛ  ನ್ಯಾಯಾಲಯದ ನ್ಯಾಯಾಧೀಶರಾದ ಎಮ್.ಜಿ.ಎಸ್. ಕಮಾಲ್ ಮತ್ತು ಜಿ.ಬಸವರಾಜ ಭಾಗವಹಿಸಿದ್ದರು.

<><*<><>*><>

ಪಂಚಮಸಾಲಿ ವರ್ಗದವರು ೨ಎ ಮೀಸಲಾತಿಗಾಗಿ ಬೇಡಿಕೆ ಇಟ್ಟಿದ್ದನ್ನು ವಿರೋಧಿಸಿ ಶಿವಮೊಗ್ಗದ ಅಹಿಂದಾ ಚಳುವಳಿ ಸಂಘಟನೆ ಇದೇ ೧೮ ರಂದು ನಗರದ ಸೈನ್ಸ್ ಮೈದಾನದಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ಪ್ರತಿಭಟನೆ ನಡೆಸಲಿದೆ. ಈ ಕುರಿತು ಅಹಿಂದ  ಚಳವಳಿಯ ಸಂಘಟನೆ ಮತ್ತು ಹಿಂದುಳಿದ ಜನಜಾಗೃತಿ ವೇದಿಕೆಯ ಮುಖಂಡ ರಾಜಪ್ಪ ಮಾತನಾಡಿ, ಪ್ರಸ್ತುತ ೩ ಬಿ ಗ್ರೂಪ್ ನಲ್ಲಿರುವ ಪಂಚಮಸಾಲಿ ಜನಾಂಗದವರು ಶೇಕಡಾ ೫ ರಷ್ಟು ಮೀಸಲಾತಿ ವ್ಯಾಪ್ತಿಗೆ ಒಳಪಟಿದ್ದು, ಅದರ ಸೌಲಭ್ಯಗಳನ್ನ ಪಡೆಯುತ್ತಿದ್ದಾರೆ ಎಂದು ತಿಳಿಸಿದ್ದಾರೆ.

<><*<><>*><>

ಮಕ್ಕಳಲ್ಲಿ ಪಠ್ಯೇತರ ಚಟುವಟಿಕೆಗಳ ಜೊತೆಗೆ ದೇಶದ ಸಂಸ್ಕೃತಿ, ಪರಂಪರೆಯನ್ನು ಬೆಳೆಸಲು, ಪ್ರೋತ್ಸಾಹಿಸುವಲ್ಲಿ ಪ್ರತಿಭಾ ಕಾರಂಜಿ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದು ಶಿವಮೊಗ್ಗ ನಗರ ಶಾಸಕರಾದ ಎಸ್ ಎನ್ ಚೆನ್ನಬಸಪ್ಪ ತಿಳಿಸಿದ್ದಾರೆ.  ಶಿವಮೊಗ್ಗದಲ್ಲಿಂದು ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಲ್ಲಿ ಪ್ರತಿಭೆಯನ್ನು ಹೊರತರಲು ನಮ್ಮ ದೇಶದ ಸಂಸ್ಕೃತಿ, ಪರಂಪರೆ, ಪದ್ಧತಿಯ ಪರಿಚಯಿಸಲು ಪ್ರತಿಭಾ ಕಾರಂಜಿ ಕಾರ್ಯಕ್ರಮ ಆಯೊಜಿಸಲಾಗಿದೆ.  ಶಿಕ್ಷಕರು ಮಕ್ಕಳಲ್ಲಿ ಒಳ್ಳೆಯ ಕಲೆಯನ್ನು ಹುಡುಕಿ ತೆಗೆಯುವ ಕೆಲಸ ಮಾಡಬೇಕು. ಎಂದು ಹೇಳಿದ್ದಾರೆ.

<><*<><>*><>

ಕುವೆಂಪು ವಿಶ್ವವಿದ್ಯಾನಿಲಯದ ಅಂತರ್ ಕಾಲೇಜು ಮಟ್ಟದ ಪುರುಷ ಮತ್ತು ಮಹಿಳಾ ಯೋಗ ಪಂದ್ಯಾವಳಿ ಶಿವಮೊಗ್ಗ ಕಮಲ ನೆಹರು ಸ್ಮಾರಕ ರಾಷ್ಟ್ರೀಯ ಮಹಿಳಾ ಕಾಲೇಜಿನಲ್ಲಿ ಆಯೋಜಿಸಲಾಗಿತ್ತು. ಕುವೆಂಪು ವಿಶ್ವವಿದ್ಯಾಲಯಕ್ಕೆ ಸೇರಿದ ಎಲ್ಲಾ ಕಾಲೇಜುಗಳ ವಿದ್ಯಾರ್ಥಿ ವಿದ್ಯಾರ್ಥಿನಿಯರು ಈ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಇದರಲ್ಲಿ ಮುಂಬರುವ ವಿಶ್ವವಿದ್ಯಾಲಯಗಳ ಯೋಗ ಪಂದಾವಳಿಗೆ ತಂಡವನ್ನು ಆಯ್ಕೆ ಮಾಡಲಾಗಿದೆ. ಕುವೆಂಪು ವಿಶ್ವವಿದ್ಯಾಲಯ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಎನ್.ಡಿ ವಿರೂಪಾಕ್ಷ ಮಾತನಾಡಿ, ಮನುಷ್ಯರ ಸರ್ವತೋಮುಖ ಅಭಿವೃದ್ಧಿ ಆಗಬೇಕಾದರೆ ದೇಹ ಮತ್ತು ಮನಸ್ಸು ಇವೆರಡನ್ನೂ ಕೂಡ ನಾವು ಸಮತೋಲನವಾಗಿ ಇಟ್ಟುಕೊಳ್ಳಲು ಯೋಗ ಸಹಕಾರಿಯಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ವಿರೂಪಾಕ್ಷ**

<><*<><>*><>

ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಪಂದ್ಯದಲ್ಲಿ ಆತಿಥೇಯ ಬೆಂಗಳೂರು ಫುಟ್‌ಬಾಲ್ ಕ್ಲಬ್, ವಿರುದ್ಧ ಗೋವಾ ತಂಡ ೨.೧ ಗೋಲುಗಳಿಂದ ಮುನ್ನಡೆ ಸಾಧಿಸಿದೆ.

<><*<><>*><>

**ಸಂಕ್ಷಿಪ್ತ ಸುದ್ದಿಗಳು...**

೧. ಕೃಷಿ ಇಲಾಖೆಯಿಂದ ರಾಜ್ಯಮಟ್ಟದ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆಯ ಪೂರ್ವಭಾವಿಯಾಗಿ ಜಿಲ್ಲಾ ಮಟ್ಟದಲ್ಲಿ ಪಾಕ ಸ್ಪರ್ಧೆಯನ್ನು ಇದೇ ೨೩ ರಂದು ಬೆಳಗ್ಗೆ ೧೦ ಗಂಟೆಗೆ ಉತ್ತರಕನ್ನಡ ಜಿಲ್ಲೆಯ ಶಿರಸಿಯ ಅರಣ್ಯ ಮಹಾವಿದ್ಯಾಲಯದ ಆವರಣದಲ್ಲಿ ಏರ್ಪಡಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

೨. ಬಯಲಾಟಕ್ಕೆ ಸಂಬಂಧಿಸಿದ ರೆಪಾರ್ಟರಿಯನ್ನು ಬಳ್ಳಾರಿಯಲ್ಲಿ ತೆರೆಯಬೇಕು. ಪದವಿ, ಸ್ನಾತಕೋತ್ತರ ಪದವಿಯಲ್ಲಿ ಬಯಲಾಟ ಮತ್ತು ಪಾತ್ರಧಾರಿಗಳ ಕುರಿತ ಪಠ್ಯ ಅಳವಡಿಸಬೇಕು ಎಂದು ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಲೇಖಕ ಡಾ. ಕುಂ ವೀರಭದ್ರಪ್ಪ ಹೇಳಿದ್ದಾರೆ.

೩. ಇದೇ ೧೯ ರಿಂದ ೨೪ ರವರೆಗೆ ಮಧ್ಯಪ್ರದೇಶದ ಇಂದೋರ್ ನಲ್ಲಿ ರಾಷ್ಟ್ರಮಟ್ಟದ ಕರಾಟೆ ಪಂದ್ಯಾವಳಿ ನಡೆಯಲಿದ್ದು, ಶಿವಮೊಗ್ಗ ಜಿಲ್ಲೆಯ ಮೊಹಮದ್ ಬಿಲಾಲ್ ಆಯ್ಕೆಯಾಗಿದ್ದಾರೆ ಎಂದು ಕರಾಟೆ ಅಸೋಸಿಯೇಶನ್‌ನ ಅಧ್ಯಕ್ಷ ಮೊಹಮ್ಮದ್ ಗನಿ ತಿಳಿಸಿದ್ದಾರೆ.